ಬಂಟರ ಸಂಘ ಬೆಂಗಳೂರು
BUNTS' SANGHA BANGALORE

# ಕ್ರೀಡಾ ಸಮಿತಿ

ಆತ್ಮೀಯ ಸದಸ್ಯರೇ,

2024–25 ನೇ ಸಾಲಿಗೆ ಕ್ರೀಡಾ ಸಾಧನಾ ಪ್ರಶಸ್ತಿಗಾಗಿ ಅರ್ಹ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸುತ್ತಿದ್ದು, ಅರ್ಜಿ ಸಲ್ಲಿಸ ಬಯಸುವ ಅಭ್ಯರ್ಥಿಗಳು ಈ ಕೆಳಗಿನ ಅರ್ಹತೆಗಳನ್ನು ಹೊಂದಿದ್ದು, ದಾಖಲೆಗಳನ್ನು ಲಗತ್ತಿಸತಕ್ಕದ್ದು.

- ತಮ್ಮ ಸಾಧನೆಗಳು ಕಳೆದ ಸಾಲಿನಲ್ಲಿ ಪಡೆದ ಪ್ರಶಸ್ತಿ ಸ್ವೀಕರಿಸಿರುವುದಕ್ಕಿಂತ ಹೆಚ್ಚಿನದಾಗಿರಬೇಕು.
- ದೇಶ ಅಥವಾ ರಾಜ್ಯವನ್ನು ಪ್ರತಿನಿಧಿಸಿ ಪ್ರಶಸ್ತಿ ಪಡೆದಿರತಕ್ಕದ್ದು. ಇಲ್ಲವೇ ಅಖಿಲ ಭಾರತ ಅಂತರ –ವಿಶ್ವವಿದ್ಯಾಲಯ ಕ್ರೀಡಾಕೂಟಗಳಲ್ಲಿನ ಪ್ರಶಸ್ತಿ/ ಪದಕ ವಿಜೇತರಾಗಿರಬೇಕು.
- ಭಾಗವಹಿಸಿರುವ ಎಲ್ಲಾ ಸ್ಪರ್ಧೆಗಳು ಭಾರತೀಯ ಒಲಿಂಪಿಕ್ಸ್ ಅಸೋಸಿಯೇಶನ್‌ನ ಪ್ರಾಯೋಜಕತ್ವದಲ್ಲಿ ನಡೆದಿರಬೇಕು ಅಥವಾ ಅದರಿಂದ ಗುರುತಿಸಲ್ಪಟ್ಟ ಅಂಗಸಂಸ್ಥೆಗಳ ವತಿಯಿಂದ ನಡೆಸಿರುವ ಕ್ರೀಡಾಕೂಟಗಳಾಗಿರಬೇಕು.
- ಅರ್ಜಿಯೊಂದಿಗೆ ತಮ್ಮ ಇತ್ತೀಚಿನ ಸಾಧನೆಯ ದಾಖಲೆಗಳ ಎಲ್ಲಾ ಯಥಾಪ್ರತಿ, ತಮ್ಮ ವೈಯಕ್ತಿಕ ಪರಿಚಯ, 1 ಪಾಸ್ ಪೋರ್ಟ್ ಅಳತೆಯ ಭಾವಚಿತ್ರವನ್ನು ಒದಗಿಸಬೇಕು.

ಮೇಲ್ಕಂಡ ಅರ್ಹತೆಯುಳ್ಳ ಅರ್ಜಿಗಳನ್ನು ಗೌರವ ಕಾರ್ಯದರ್ಶಿ ಇವರಿಗೆ ನಮೂದಿಸಿ ಸಂಘದ ವಿಳಾಸಕ್ಕೆ ದಿನಾಂಕ **31.12.2024** ರ ಒಳಗಾಗಿ ತಲುಪುವಂತೆ ಸಲ್ಲಿಸಲು ಕೋರಲಾಗಿದೆ. ಆಯ್ಕೆಯಾದ ಅಭ್ಯರ್ಥಿಗಳಿಗೆ ದಿನಾಂಕ **26.01.2025** ರಂದು ನಡೆಯಲಿರುವ ಸಂಘದ ಸ್ಥಾಪಕರ ದಿನಾಚರಣೆಯ ಸಮಾರಂಭದಲ್ಲಿ ಚೆಕ್ ಹಾಗೂ ಪ್ರಶಸ್ತಿ ಫಲಕ ನೀಡಿ ಗೌರವಿಸಲಾಗುವುದು.

ನಿಗದಿತ ದಿನಾಂಕದ ನಂತರ ಬಂದ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ.

**ವಿಜಯ್ ಜೆ. ಶೆಟ್ಟಿ ಹಾಲಾಡಿ**
**ಗೌರವ ಕಾರ್ಯದರ್ಶಿ**

**ಸಿಎ. ಅಶೋಕ್ ಶೆಟ್ಟಿ ಎಂ.**
**ಅಧ್ಯಕ್ಷರು**

**ಸಬನ್ ಶೆಟ್ಟಿ ಗುಡಿಬೆಟ್ಟು**
**ಸಂಚಾಲಕರು, ಕ್ರೀಡಾ ಸಮಿತಿ**

**ಸುರೇಂದ್ರ ಶೆಟ್ಟಿ, ಹಡಾಳಿ**
**ಚೇರ್‌ಪರ್ಸನ್, ಕ್ರೀಡಾ ಸಮಿತಿ**

**ಪದಾಧಿಕಾರಿಗಳು, ಕಾರ್ಯಕಾರಿ ಸಮಿತಿ ಸದಸ್ಯರು ಹಾಗೂ ಕ್ರೀಡಾ ಸಮಿತಿ ಸದಸ್ಯರು**